**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 1623/2015 CW-8 PW-5**

**ಸಾಕ್ಷಿಯನ್ನು ದಿಃ 05.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಭಾರತಿ |
| ಗಂಡನ ಹೆಸರುಃ | ಲಕ್ಕೇಗೌಡ |
| ವಯಸ್ಸುಃ | 54 ವರ್ಷ |
| ವೃತ್ತಿಃ | ಗೃಹಿಣಿ |
| ವಾಸ ಸ್ಥಳಃ | ಗುಲಸಿಂದ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿ ನಿಪಿ-6 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಸದರಿ ಛಾಪಾ ಕಾಗದ ಯಾವ ಉದ್ದೇಶಕ್ಕೆ ಪಡೆದಿದ್ದೇನೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕೆ ಯಾರಿಗೆ ನೀಡಿದ್ದೇನೆ ಎಂದು ಗೊತ್ತಿಲ್ಲ. ಈ ಸಂಬಂಧ ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿ ನನ್ನ ಗಂಡನ ಸ್ನೇಹಿತರಾಗಿದ್ದು ಬಡ್ಡಿ ವ್ಯಾಪಾರ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನನ್ನ ಗಂಡ ಆರೋಪಿಯಿಂದ ಏಪ್ರಿಲ್ 2012 ರಲ್ಲಿ ರೂ. 20,000/- ಸಾಲ ಪಡೆದು ಅದಕ್ಕೆ ಭದ್ರತೆಗಾಗಿ ಖಾಲಿ ಛಾಪಾ ಕಾಗದದ ಮೇಲೆ ನನ್ನ ಸಹಿ ಮಾಡಿಸಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ನಾವು ಪ್ರತಿ ತಿಂಗಳು ಶೇ 5 ರಂತೆ ಆರೋಪಿಗೆ ಬಡ್ಡಿ ನೀಡುತ್ತಿದ್ದೆವು ಎಂದರೆ

ಸರಿಯಲ್ಲ. ಆರೋಪಿ ಹೆಚ್ಚಿನ ಬಡ್ಡಿ ದರದಲ್ಲಿ ಸಾಲ ನೀಡುತ್ತಿದ್ದ ಸಂಬಂಧ ಅವರ ವಿರುದ್ಧ ಪ್ರಕರಣ ದಾಖಲಾಗಿದ್ದು ಪೋಲೀಸರು ಆರೋಪಿಯ ಮನೆಯಲ್ಲಿ ನಿಪಿ-6 ರ ದಾಖಲೆಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಗೊತ್ತಿಲ್ಲ. ಆರೋಪಿ ಹೆಚ್ಚಿನ ಬಡ್ಡಿ ದರಕ್ಕೆ ಸಾಲ ನೀಡುತ್ತಿದ್ದ ಬಗ್ಗೆ ನನಗೆ ಗೊತ್ತಿದೆ ಎಂದರೆ ಸರಿಯಲ್ಲ. ಈ ರೀತಿ ನಾನು ಪೋಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ದಿಃ 15.08.2014 ರ ಹೇಳಿಕೆಯನ್ನು ಓದಿ ಹೇಳಲಾಗಿ ಅದನ್ನು ಅಲ್ಲಗಳೆದಿದ್ದು ಅದನ್ನು ನಿಪಿ-15 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ನನಗೆ ಗೊತ್ತಿದ್ದು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ ಎಸ್ ಎ ರವರಿಂದ ಃ</u>**

ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿದ್ದು ಅನುಮತಿಸಲಾಯಿತು.

**<u>ಮರು ವಿಚಾರಣೆಃ ಇಲ್ಲಾ</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**